# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು(ನಗರ ಯೋಜನೆ-ದ) ರವರ ಕಛೇರಿ,ಮಹಾನಗರ ಪಾಲಿಕೆ,ಎನ್.ಆರ್. ವೃತ್ತ,ಬೆಂಗಳೂರು-02.

ಸಂಖ್ಯೆ: ಜೆಡಿಟಿಪಿ(ದ)/ಪ್ರಾ.ಪ/ಸನಿ/ 16 /2019-20

ದಿನಾಂಕ: 27-08-2019.

## ಪ್ರಾರಂಭಿಕ ಪ್ರಮಾಣ ಪತ್ರ

ವಿಷಯ: ಆಸ್ತಿ ಸಂಖ್ಯೆ 54, ಪಿಐಡಿ ಸಂಖ್ಯೆ 10-1-54, ಇಂಡಸ್ಟ್ರಿಯಲ್ ಸಬ್‌ಅರ್ಬ್, ಮಹಾಲಕ್ಷ್ಮೀಪುರಂ ಉಪವಿಭಾಗ, ವಾರ್ಡ್ ಸಂಖ್ಯೆ 44, ಬೆಂಗಳೂರು ಇಲ್ಲಿ ನಿರ್ಮಿಸಲಾಗುತ್ತಿರುವ ವಸತಿ ಸಮುಚ್ಛಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ಅರ್ಜಿದಾರರ ಮನವಿ ದಿನಾಂಕ: 19-06-2019.

2) ನಕ್ಷೆ ಮಂಜೂರಾತಿ ಸಂಖ್ಯೆ: BBMP/ Addl.Dir/JD South/ 0003/15-16 ದಿನಾಂಕ: 24-09-2018.

3) ಅಪರ ನಿರ್ದೇಶಕರು, ನಗರ ಯೋಜನೆ ರವರ ಅನುಮೋದನೆ ದಿನಾಂಕ: 20-08-2019.

*****

ಆಸ್ತಿ ಸಂಖ್ಯೆ 54, ಪಿಐಡಿ ಸಂಖ್ಯೆ 10-1-54, ಇಂಡಸ್ಟ್ರಿಯಲ್ ಸಬ್‌ಅರ್ಬ್, ಮಹಾಲಕ್ಷ್ಮೀಪುರಂ ಉಪವಿಭಾಗ, ವಾರ್ಡ್ ಸಂಖ್ಯೆ 44, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ ತಳ+ನೆಲ+ಮೇಲಿನ 4 ಅಂತಸ್ತುಗಳ 39 ಘಟಕಗಳುಳ್ಳ ವಸತಿ ಸಮುಚ್ಛಯ ಕಟ್ಟಡ ನಿರ್ಮಿಸಲು ಈ ಕಛೇರಿಯಿಂದ ಎಲ್.ಪಿ ಸಂಖ್ಯೆ: BBMP/ Addl.Dir/JD South/ 0003/15-16 ದಿನಾಂಕ: 24-09-2018 ರಂದು ನಕ್ಷೆ ಮಂಜೂರಾತಿ ನೀಡಲಾಗಿದೆ. ಉಲ್ಲೇಖ (1) ರ ಮನವಿಗೆ ಸಂಬಂಧಿಸಿದಂತೆ, ವಸತಿ ಸಮುಚ್ಛಯ ಕಟ್ಟಡದ ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಸಲುವಾಗಿ ದಿನಾಂಕ: 14-08-2019 ರಂದು ಸ್ಥಳ ಪರಿಶೀಲಿಸಲಾಗಿ ಮಂಜೂರಾತಿ ನಕ್ಷೆಯನ್ವಯ ಅಗತ್ಯ ನಡುಜಾಗಗಳನ್ನು ಬಿಟ್ಟು ಆರ್.ಸಿ.ಸಿ ಕಂಬಗಳನ್ನು ನಿರ್ಮಿಸಿದ್ದು, ಸದರಿ ಪ್ರಸ್ತಾವನೆಗೆ ಉಲ್ಲೇಖ (3) ರಂತೆ ಅಪರ ನಿರ್ದೇಶಕರು, ನಗರ ಯೋಜನೆ ರವರ ಅನುಮೋದನೆ ನೀಡಿರುತ್ತಾರೆ. ಪ್ರಾರಂಭಿಕ ಪ್ರಮಾಣ ಪತ್ರಕ್ಕೆ ಅಗತ್ಯ ಶುಲ್ಕವಾದ ರೂ. 54,000/- ಗಳನ್ನು ಅರ್ಜಿದಾರರು ರಸೀದಿ ಸಂಖ್ಯೆ: RE-ifms624-TP/000072 ದಿನಾಂಕ: 27-08-2019 ರಂದು ಸಂದಾಯಿಸಿಕೊಳ್ಳಲಾಗಿದೆ. ಆದುದರಿಂದ ಸದರಿ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಛಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ನೀಡಲಾಗಿದೆ.

1) ಕಟ್ಟಡ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಕಛೇರಿಗೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
3) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ತೊಂದರೆಯಾಗದಂತೆ ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
4) ನಕ್ಷೆ ಮಂಜೂರಾತಿ ಪಡೆದ ದಿನಾಂಕದಿಂದ ಐದು ವರ್ಷದೊಳಗಾಗಿ ಕಟ್ಟಡದ ಕಾಮಗಾರಿಯನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆಯತಕ್ಕದ್ದು.

ಸಹಿ/-

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ

M/s. Jivin Green Realty Limited
Rep by its Director Smt. Rama Sudarshan
# 866, Basement Floor, Modi Hospital Road
W.C. Road, Mahalakshmi Puram
Bengaluru – 560 086.

ಪ್ರತಿಯನ್ನು: ಕಾರ್ಯಪಾಲಕ ಅಭಿಯಂತರರು / ಸಹಾಯಕ ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮಿ ಲೇಔಟ್ ರವರಿಗೆ ಮಾಹಿತಿಗಾಗಿ ಮತ್ತು ಕ್ರಮಕ್ಕಾಗಿ.

ಜಂಟಿ ನಿರ್ದೇಶಕರು, ನಗರ ಯೋಜನೆ (ದಕ್ಷಿಣ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

Scanned by CamScanner